1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂ:24/2024**

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿ : 1 ರಂಗಸ್ವಾಮಿ ಉ.ಗುಂಡ ಬಿನ್ ಲೇಟ್ ಮಹದೇವನಾಯಕ 32 ವರ್ಷ

2 ಸುಶೀಲಮ್ಮ ಕೋಂ ಲೇಟ್ ಮಹದೇವನಾಯಕ 52 ವರ್ಷ

3 ನಂಜಮ್ಮ ಕೋಂ ಲೇಟ್ ಕೆಂಪನಾಯಕ 87 ವರ್ಷ

4 ಮಂಜು ಬಿನ್ ಲೇಟ್ ಮಹದೇವನಾಯಕ 35 ವರ್ಷ

ಹಾಲಿ ವಾಸ: ಸಂ:245, 1 ನೇ ಕ್ರಾಸ್ ,ಕಿಡಿಗಣ್ಣಮ್ಮನ ಲೇಔಟ್, ಮೈಸೂರು ಸಿಟಿ

ಎಲ್ಲರ ವಾಸ: ಮಲ್ಲಹಳ್ಳಿ ಗ್ರಾಮ, ನಂಜನಗೂಡು ತಾ.

## ದೋಷಾರೋಪಣೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ:-19.07.2023 ರಂದು ಸಂಜೆ 06-00 ಗಂಟೆ ಸಮಯದಲ್ಲಿ ನಂಜನಗೂಡು ತಾಲ್ಲೂಕು ಕವಲಂದೆ ಪೊಲೀಸ್ ಠಾಣಾ ಸರಹದ್ದು ಮಲ್ಲಹಳ್ಳಿ, ಗ್ರಾಮದ ನಾಯಕರ ಜನಾಂಗದ ಬೀದಿಯಲ್ಲಿರುವ ಪುಟ್ಟಬಸವನಾಯಕ ರವರ ಮನೆಯಲ್ಲಿ 1 ನೇ ಆರೋಪಿತರಾದ ನೀವು ಪುಟ್ಟ ಬಸವನಾಯಕ ರವರ ಮನೆಯ ಒಳಗಡೆ ಅತಿಕ್ರಮವಾಗಿ ನುಗ್ಗಿ ಅಕ್ರಮ ಪ್ರವೇಶ ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.448 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿತರಾದ ನೀವು ಪುಟ್ಟ ಬಸವನಾಯಕ ರವರ ಮನೆಯ ಒಳಗಡೆ ಅತಿಕ್ರಮವಾಗಿ ನುಗ್ಗಿ ಅವರನ್ನು ಹೊರಗಡೆ ಹೋಗದಂತೆ ತಡೆದು

ಅಕ್ರಮ ತಡೆಯನ್ನುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.341 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿತರಾದ ನೀವು ಚಾಸಾ.2 ರವರಿಂದ ಕುಡಿಯಲು 100/– ರೂ ಗಳನ್ನು ಈಸಿಕೊಂಡು, ನಂತರ ಕೇಳಲು ಬಂದ ಚಾಸಾ. 1 ರವರಿಗೆ ಮಚ್ಚಿನ ಹಿಂಭಾಗದಿಂದ ಬೆನ್ನಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.324 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿತರಾದ ನೀವು ಚಾಸಾ. 1 ರವರಿಗೆ ನೀನಿದರೆ ತಾನೇ ಕೇಸು ಹಾಕುತ್ತೀಯ ನಿನ್ನನ್ನು ಮುಗಿಸಿ ಬಿಡುತ್ತೇನೆಂದು ಹೇಳಿ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 2 ರಿಂದ 4 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ಸೂಳೆ ಮುಂಡೆ, ಬೋಳಿಮಗಳೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಆಕೆಗೆ ಅವಮಾನ ಮಾಡುವ ಉದ್ದೇಶದಿಂದ ಆಕೆಯ ಘನತೆಗೆ ಕುಂದುಂಟು ಮಾಡಿರುತ್ತೀರಿ . ಆದ್ದರಿಂದ ಆರೋಪಿತರಾದ

ನೀವು ಭಾರತ ದಂಡ ಸಂಹಿತೆ ಕಲಂ.509 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿತರಾದ ನೀವು ಶಿವಬಸವನಾಯಕ ರವರಿಗೆ ಸೇರಿದ ಚಿಲ್ಲರೆ ಅಂಗಡಿಯಲ್ಲಿನ ಕಾರಬೊಂದಿ, ಸಿಹಿ ತಿನ್ನಿಸು, ತರಕಾರಿಗಳನ್ನು ಇನ್ನಿತರೆ ಸಾಮಾನುಗಳನ್ನು ಚೆಲ್ಲಾಪಿಲ್ಲಿ ಮಾಡಿ ಹೊರಕ್ಕೆ ಎಸೆದು ಸಾಮಾನುಗಳನ್ನು ನಾಶ ಮಾಡಿ ಸುಮಾರು 3000/- ರೂ ಗಳಷ್ಟು ನಷ್ಟ ಉಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.427 ಸಹವಾಚಕ ಕಲಂ.34 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 08.07.2026 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಃ24/2024**

ಪಿರ್ಯಾದಿ ಃ ಕವಲಂದೆ ಪೊಲೀಸರು

ವಿರುದ್ಧ

ಆರೋಪಿ ಃ 1 ರಂಗಸ್ವಾಮಿ ಉ.ಗುಂಡ ಬಿನ್ ಲೇಟ್ ಮಹದೇವನಾಯಕ 32 ವರ್ಷ

2 ಸುಶೀಲಮ್ಮ ಕೋಂ ಲೇಟ್ ಮಹದೇವನಾಯಕ 52 ವರ್ಷ

3 ನಂಜಮ್ಮ ಕೋಂ ಲೇಟ್ ಕೆಂಪನಾಯಕ 87 ವರ್ಷ

4 ಮಂಜು ಬಿನ್ ಲೇಟ್ ಮಹದೇವನಾಯಕ 35 ವರ್ಷ

ಹಾಲಿ ವಾಸಃ ಸಂಃ245, 1 ನೇ ಕ್ರಾಸ್ ,ಕಿಡಿಗಣ್ಣಮ್ಮನ ಲೇಔಟ್, ಮೈಸೂರು ಸಿಟಿ

ಎಲ್ಲರ ವಾಸಃ ಮಲ್ಲಹಳ್ಳಿ ಗ್ರಾಮ, ನಂಜನಗೂಡು ತಾ.

ಃ ಆಪಾದನೆ ಃ

ಪ್ರಶ್ನೆಃ1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ

ಪ್ರಶ್ನೆಃ2- ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**